ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು.

ಸಂಖ್ಯೆ: ಯುಎ.1/196/2024–25

ದಿನಾಂಕ : 14–11–2025

## ಸಭಾಸೂಚಿ

ಮಾನ್ಯ ಸಿಂಡಿಕೇಟ್ ಸದಸ್ಯರುಗಳಿಗೆ,

ಮಾನ್ಯರೆ,

ವಿಷಯ : ದಿನಾಂಕ : 26–11–2025ರಂದು "ಸಿಂಡಿಕೇಟಿನ ಏಳನೇ ಸಾಮಾನ್ಯ ಸಭೆ"ಯನ್ನು ಏರ್ಪಡಿಸಿರುವ ಬಗ್ಗೆ.

= = = = = =

ದಿನಾಂಕ : 26–11–2025ರಂದು ಬುಧವಾರ ಪೂರ್ವಾಹ್ನ 11–30 ಗಂಟೆಗೆ "ಸಿಂಡಿಕೇಟಿನ ಏಳನೇ ಸಾಮಾನ್ಯ ಸಭೆ"ಯನ್ನು ಮೈಸೂರು ವಿಶ್ವವಿದ್ಯಾನಿಲಯದ ಕ್ರಾಫರ್ಡ್ ಭವನದ ಸಿಂಡಿಕೇಟ್ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ. ತಾವುಗಳು ಈ ಸಭೆಗೆ ಆಗಮಿಸಬೇಕಾಗಿ ಕೋರಲಾಗಿದೆ.

| | | |
|---|---|---|
| 01 | ಕಾರ್ಯಸೂಚಿಯಲ್ಲಿ ಸೇರಿಸಲು ಸದಸ್ಯರಿಂದ ಪ್ರಸ್ತಾವನೆಯನ್ನು ಸ್ವೀಕರಿಸಲು ಕೊನೆಯ ದಿನಾಂಕ | 17–11–2025 ಸೋಮವಾರ |
| 02 | ಪೂರ್ವಭಾವಿ ಕಾರ್ಯಸೂಚಿಯನ್ನು ಸದಸ್ಯರಿಗೆ ರವಾನಿಸುವ ದಿನಾಂಕ | 19–11–2025 ಬುಧವಾರ |
| 03 | ಕಳುಹಿಸಿದ ವಿಷಯಗಳಿಗೆ / ಪ್ರಸ್ತಾವನೆಗಳಿಗೆ ಸದಸ್ಯರಿಂದ ತಿದ್ದುಪಡಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕ | 21–11–2025 ಶುಕ್ರವಾರ |
| 04 | ಪೂರಕ ಕಾರ್ಯಸೂಚಿಯನ್ನು ಸದಸ್ಯರಿಗೆ PDF Versionನ್ನು e-mail ಮೂಲಕ ಕಳುಹಿಸುವ ದಿನಾಂಕ | 25–11–2025 ಮಂಗಳವಾರ |

ತಮ್ಮ ನಂಬುಗೆಯ,

14/11/2025

ಕುಲಸಚಿವರು

14/11/25

ಪ್ರತಿ :

1. ಗೌರವಾನ್ವಿತ ರಾಜ್ಯಪಾಲರ ವಿಶೇಷ ಕಾರ್ಯದರ್ಶಿಗಳು, ರಾಜಭವನ, ಬೆಂಗಳೂರು–01.
2. ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ವಿಶ್ವವಿದ್ಯಾನಿಲಯಗಳು), ಕರ್ನಾಟಕ ಸರ್ಕಾರ, ಬಹುಮಹಡಿಗಳ ಕಟ್ಟಡ, ಬೆಂಗಳೂರು–1–ಮಾಹಿತಿಗಾಗಿ
3. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು–ಸದಸ್ಯರುಗಳಿಗೆ ನಿಯಮಾನುಸಾರ ಪ್ರಯಾಣ ಭತ್ಯೆ ದಿನಭತ್ಯೆ/ಸಭಾಭತ್ಯೆಗಳನ್ನು ನೀಡಲು ಕ್ರಮ ಕೈಗೊಳ್ಳುವಂತೆ ಕೋರಲಾಗಿದೆ.
4. ನಿರ್ದೇಶಕರು, ಪಿ.ಎಂ.ಇ.ಬಿ./ಕಾಲೇಜು ಅಭಿವೃದ್ಧಿ ಮಂಡಳಿ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ನಿರ್ದೇಶಕರು, ದೂರ ಶಿಕ್ಷಣ ನಿರ್ದೇಶನಾಲಯ, ಮಾನಸಗಂಗೋತ್ರಿ, ಮೈಸೂರು.
6. ಎಲ್ಲಾ ಉಪಕುಲಸಚಿವರು / ಸಹಾಯಕ ಕುಲಸಚಿವರು, ಆಡಳಿತ/ಪರೀಕ್ಷಾ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
7. ಉಪಕುಲಸಚಿವರು, ಪರಿಶಿಷ್ಟ ಜಾತಿ/ವರ್ಗದ ವಿಶೇಷ ಘಟಕ, ಮಹಾರಾಜ ಕಾಲೇಜು ಆವರಣ, ಮೈಸೂರು ವಿವಿ, ಮೈಸೂರು.
8. ನಿರ್ದೇಶಕರು, ಇ.ಎಂ.ಆರ್.ಸಿ. ಮಾನಸಗಂಗೋತ್ರಿ, ಮೈಸೂರು – ಇವರು ತಮ್ಮ ಸಿಬ್ಬಂದಿಗಳ ಮೂಲಕ ಸಿಂಡಿಕೇಟ್ ಸಭೆಯ ವಿಡಿಯೋ ಚಿತ್ರಿಕರಣ ಮಾಡುವ ವ್ಯವಸ್ಥೆ ಮಾಡಬೇಕಾಗಿ ಕೋರಲಾಗಿದೆ.
9. ನಿರ್ದೇಶಕರು, ಇನ್ಫರ್ಮೇಶನ್ ಅಂಡ್ ಕಮ್ಯುನಿಕೇಷನ್ ಡಿವಿಜನ್, ಗಣಕ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು–ಇವರು ಸಿಂಡಿಕೇಟ್ ಸಭೆಯ ವಿಡಿಯೋ ಚಿತ್ರಿಕರಣ ಮತ್ತು ಕಾರ್ಯಸೂಚಿಗಳನ್ನು ಅಳವಡಿಸಬೇಕಾಗಿ ಸೂಚಿಸಲಾಗಿದೆ.
10. ಅಧೀಕ್ಷಕರು, ಸಾಮಾನ್ಯ, ಆಡಳಿತ ಶಾಖೆ, ಮೈಸೂರು ವಿಶ್ವವಿದ್ಯಾನಿಲಯ ಮೈಸೂರು– ಸಭೆಯ ದಿನದಂದು ನಡವಳಿಯನ್ನು ದಾಖಲಿಸಲು, ಕನ್ನಡ, ಇಂಗ್ಲೀಷ್ ಭಾಷೆಯ ಇಬ್ಬರು ಶೀಘ್ರಲಿಪಿಗಾರರನ್ನು ನಿಯೋಜಿಸಲು ಹಾಗೂ ರವಾನೆ ವಿಭಾಗದ ಕಾರ್ಯನಿರ್ವಾಹಕರು, ನಿಗಧಿತ ಸಮಯದಲ್ಲಿ ಸದಸ್ಯರುಗಳಿಗೆ ಸಭಾ/ಕಾರ್ಯಸೂಚಿಯನ್ನು ತಲುಪಿಸುವ ವ್ಯವಸ್ಥೆ ಮಾಡಲು ಸಹ ಕ್ರಮ ವಹಿಸಲು ಸಂಬಂಧಪಟ್ಟವರಿಗೆ ತಿಳಿಸುವುದು.
11. ಎಲ್ಲಾ ಅಧೀಕ್ಷಕರು, ಆಡಳಿತ ವಿಭಾಗ/ಹಣಕಾಸು ವಿಭಾಗ/ಪರೀಕ್ಷಾ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
12. ಕಾರ್ಯ ನಿರ್ವಾಹಕರು, ಜಿಎಲ್–8, ಆಡಳಿತ ಶಾಖೆ – ಸಭೆಯ ಕಾರ್ಯಸೂಚಿಯನ್ನು ಮಾನ್ಯ ಸದಸ್ಯರುಗಳಿಗೆ ತಲುಪಿಸಬೇಕಾದ ತುರ್ತು ಸಂದರ್ಭದಲ್ಲಿ ಒಂದು ವಾಹನವನ್ನು ಹಾಗೂ ಸಭೆಯ ದಿನಾಂಕದಂದು ಪೂರ್ವಾಹ್ನ 10.30 ಗಂಟೆಗೆ ಎರಡು ವಾಹನಗಳನ್ನು ಸಿಂಡಿಕೇಟಿನ ವಿಭಾಗಕ್ಕೆ ಒದಗಿಸುವುದು.
13. ಕಾರ್ಯ ನಿರ್ವಾಹಕರು, ಜಿಎಲ್–6, ಆಡಳಿತ ಶಾಖೆ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು – ಸಭೆಯ ಕಾರ್ಯಸೂಚಿಗೆ ಅಗತ್ಯವಿರುವ ಜೆರಾಕ್ಸ್ ಯಂತ್ರಗಳನ್ನು ಸುಸ್ಥಿತಿಯಲ್ಲಿಟ್ಟುಕೊಳ್ಳಲು ಹಾಗೂ ಎ4 ಅಳತೆಯ 50 ಜೆರಾಕ್ಸ್ ಪೇಪರ್ (ರಿಮ್)ಗಳನ್ನು ವ್ಯವಸ್ಥೆ ಮಾಡಿಕೊಳ್ಳುವುದು ಹಾಗೂ ದಿನಾಂಕ: 25–11–2025ರಂದು ಜೆರಾಕ್ಸ್ ತೆಗೆಯುವ ಸಿಬ್ಬಂದಿಗಳು ಸಂಜೆ 5–15ರ ನಂತರ ಸಿಂಡಿಕೇಟ್ ವಿಭಾಗದ ಉಪ ಕುಲಸಚಿವರು(ಪ್ರಾಧಿಕಾರ) ಇವರನ್ನು ಬೇಟಿ ಮಾಡಿ ಅನುಮತಿ ಪಡೆದು ಹೋಗತಕ್ಕದ್ದು.
14. ಕಾರ್ಯನಿರ್ವಾಹಕರು, ಜಿಎಲ್–5, ಆಡಳಿತ ಶಾಖೆ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು–ಜೆರಾಕ್ಸ್ ತೆಗೆಯುವ ನೌಕರರುಗಳಿಗೆ ರಜೆಯನ್ನು ಮಂಜೂರು ಮಾಡುವ ಮುನ್ನ ಪ್ರಾಧಿಕಾರ ವಿಭಾಗವನ್ನು ಸಂಪರ್ಕಿಸುವುದು.
15. ಕುಲಪತಿ/ಕುಲಸಚಿವ/ಕುಲಸಚಿವ(ಪರೀಕ್ಷಾಂಗ)/ಹಣಕಾಸು ಅಧಿಕಾರಿಯವರ ಆಪ್ತ ಸಹಾಯಕರು, ಮೈಸೂರು ವಿ.ವಿ., ಮೈಸೂರು.
16. ಕಾರ್ಯನಿರ್ವಾಹಕರು, ಎಫ್.ಬಿ–15, ಹಣಕಾಸು ಶಾಖೆ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು – ಸಭೆಯ ದಿನದಂದು ಆಸನಭತ್ಯೆ/ದಿನಭತ್ಯೆ ಮತ್ತು ಪ್ರಯಾಣಭತ್ಯೆ ಪಾವತಿಸಲು ಕ್ರಮ ಕೈಗೊಳ್ಳುವುದು.
17. ಕಛೇರಿ ಪ್ರತಿ.

ಸೂಚನೆ : ಸಿಂಡಿಕೇಟ್ ಸಭೆಯ ಮುಂದೆ ಮಂಡಿಸುವ ವಿಷಯಗಳನ್ನು 02 ಪ್ರತಿಗಳೊಂದಿಗೆ (ಎ4 ಅಳತೆಯ) ಸಂಬಂಧಪಟ್ಟ ಅಡಕ ಹಾಗೂ ಕಡತಗಳೊಂದಿಗೆ ದಿನಾಂಕ : 17–11–2025ರ ಒಳಗಾಗಿ ಸಿಂಡಿಕೇಟ್ ವಿಭಾಗಕ್ಕೆ ಕಳುಹಿಸತಕ್ಕದ್ದು.